ವಿಷಯ:- ಪರಿಶಿಷ್ಟಜಾತಿ ಮತ್ತು ಪಂಗಡದ ಜನರಿಗಾಗಿ ಸ್ಮಶಾನದ ಜಾಗಕ್ಕೆ ಭೂಸ್ವಾಧೀನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೧೫:- (೬೨೬)
ಶ್ರೀಮತಿ ಮೋಟಮ್ಮ (ಮೂಡಿಗೆರೆ)
ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಬಹುತೇಕ ಕಡೆಗಳಲ್ಲಿ ಅದರಲ್ಲೂ ಮುಖ್ಯವಾಗಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗಾಗಿ ಸ್ಮಶಾನಗಳಿಲ್ಲದೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಉದ್ದೇಶಕ್ಕಾಗಿ ಇದುವರೆವಿಗೂ ವಶಪಡಿಸಿಕೊಂಡಿರುವ ಜಮೀನಿನ ವಿಸ್ತೀರ್ಣವೆಷ್ಟು; (ಪೂರ್ಣ ವಿವರಗಳನ್ನು ನೀಡುವುದು).

ಇ) ರಾಜ್ಯದ ಯಾವ ಹಳ್ಳಿಗಳಲ್ಲಿ ಈ ಸಮಸ್ಯೆ ಇದೆ ಎಂಬುದನ್ನು ಸರ್ಕಾರದವರು ಸಮೀಕ್ಷೆಯನ್ನೇನಾದರೂ ಕೈಕೊಂಡಿರುವರೆ;

ಈ) ಹಾಗಿದ್ದಲ್ಲಿ, ಅದರ ಪೂರ್ಣ ವಿವರಗಳನ್ನು ನೀಡುವುದು;

ಉ) ಇಲ್ಲದಿದ್ದಲ್ಲಿ, ಸಮೀಕ್ಷೆಯನ್ನು ತಕ್ಷಣ ಕೈಗೊಂಡು ಭೂಸ್ವಾಧೀನ ಪಡಿಸಿಕೊಳ್ಳಲು ಕ್ರಮ ಜರುಗಿಸಲಾಗುವುದೇ?

ಶ್ರೀ ಎಂ. ರಾಜಶೇಖರಮೂರ್ತಿ
(ಕಂದಾಯ ಸಚಿವರು)

ಹೌದು, ಕೆಲವಾರು ಪ್ರಕರಣಗಳಲ್ಲಿ.

ಮಾಹಿತಿ ಲಭ್ಯವಿಲ್ಲ. ಆದರೂ ಟಿ. ನರಸೀಪುರ ತಾಲ್ಲೂಕು ಟಿ. ನರಸೀಪುರ (ಮೈಸೂರು ಜಿಲ್ಲೆ) ಗ್ರಾಮದ ಸರ್ವೆ ನಂಬರ್ ೨೧: ೧ರಲ್ಲಿ ೨-೦೦ ಎಕರೆ ಜಮೀನನ್ನು ಪರಿಶಿಷ್ಟ ಜಾತಿ ಜನರ ಸ್ಮಶಾನಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ.

ಇಲ್ಲ.

ಉದ್ಭವಿಸುವುದಿಲ್ಲ.

ಎಲ್ಲೆಲ್ಲಿ ಅಗತ್ಯವಿದೆಯೋ ಅಲ್ಲಿ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗಗಳ ಜನರ ಸ್ಮಶಾನಕ್ಕಾಗಿ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ.

ವಿಷಯ:- ರಸಗೊಬ್ಬರಗಳ ಬೆಲೆ ಏರಿಕೆಯಿಂದ ರೈತರಿಗೆ ತೊಂದರೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ ೧೧೭:- (೬೦೧)
ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ)
ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೇಂದ್ರ ಸರ್ಕಾರ ದಿಢೀರನೆ ಹೆಚ್ಚಿಸಿದ ರಸಗೊಬ್ಬರಗಳ ಬೆಲೆಗಳಿಂದಾಗಿ ರೈತ ತನಗೆ ಅಗತ್ಯವಾದಷ್ಟು ರಸಗೊಬ್ಬರವನ್ನು ಕೊಳ್ಳಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಚಾಲ್ತಿ ಸಾಲಿನಲ್ಲಿ ಈ ಹಿಂದೆ ಬಳಸುತ್ತಿದ್ದ ಪ್ರಮಾಣಕ್ಕಿಂತ ಶೇಕಡ ೩೦ ಪೊಟ್ಯಾಷ್ ಗೊಬ್ಬರ ಶೇಕಡ ೫೦ ಸಲ್ಫೇಟ್ ಗೊಬ್ಬರ ಕಡಿಮೆ ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ರಸಗೊಬ್ಬರಗಳ ಬಳಕೆ ಕಡಿಮೆಯಾದಲ್ಲಿ ಆಹಾರ ಮತ್ತು ವಾಣಿಜ್ಯ ಬೆಳೆಗಳ ಇಳುವರಿಯೂ ಸಹ ಕಡಿಮೆಯಾಗುವುದೆಂಬುದು ನಿಜವಲ್ಲವೇ?

ಈ) ಈ ಗಂಭೀರ ಪರಿಸ್ಥಿತಿಯನ್ನು ತಪ್ಪಿಸಲು ರಾಜ್ಯ ಸರ್ಕಾರವು ರೈತರಿಗೆ ಯಾವ ಯಾವ ನೆರವು ನೀಡುವುದು.

ಶ್ರೀ ಎನ್. ಹುಚ್ಚಮಾಸ್ತಿಗೌಡ
(ಕೃಷಿ ಸಚಿವರು)

ಬಂದಿದೆ.

ಚಾಲ್ತಿ ಸಾಲಿನಲ್ಲಿ ಪೊಟ್ಯಾಷ್, ಫಾಸ್ಫೇಟ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಅನಿಯಂತ್ರಣಗೊಳಿಸಿದ ಮೇಲೆ ಸೆಪ್ಟಂಬರ್ ನಿಂದ ಡಿಸೆಂಬರ್ ತಿಂಗಳವರೆಗೆ ಪೊಟ್ಯಾಷ್ ಮತ್ತು ಫಾಸ್ಫೇಟ್ ರಸಗೊಬ್ಬರಗಳ ಬಳಕೆ ಕಳೆದ ಸಾಲಿನ ಇದೇ ಅವಧಿಗೆ ಹೋಲಿಸಿದರೆ ಕ್ರಮವಾಗಿ ಸುಮಾರು ಶೇಕಡ ೬೦ ಮತ್ತು ಶೇಕಡ ೫೦ರಷ್ಟು ಕಡಿಮೆ ಆಗಿರುತ್ತದೆ.

ಹೌದು.

ಪೊಟ್ಯಾಷ್, ಫಾಸ್ಫೇಟ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಸರಬರಾಜು ಮಾಡುವ ಯೋಜನೆಯನ್ನು ಜಾರಿಗೊಳಿಸಲಾಗಿದೆ.

ಅಧ್ಯಕ್ಷರು:- ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:- ಮಾನ್ಯ ಅಧ್ಯಕ್ಷರೆ, ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಜ್ಯಪಾಲರಿಂದ ಅಥವಾ ರಾಷ್ಟ್ರಾಧ್ಯಕ್ಷರಿಂದ ಸಂದರ್ಭಾನುಸಾರವಾಗಿ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ರಾಜ್ಯಪಾಲರಿಂದ ಅಥವಾ ರಾಷ್ಟ್ರಪತಿಯವರಿಂದ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿ.

ಕ್ರಮ ಸಂಖ್ಯೆ	ವಿಧೇಯಕದ ಹೆಸರು	ಒಪ್ಪಿಗೆಯನ್ನು ಪಡೆದ ದಿನಾಂಕ	ಒಪ್ಪಿಗೆಯನ್ನು ನೀಡಿದವರು
೧.	ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕ, ೧೯೯೨	೨೮-೧೧-೧೯೯೩	ರಾಜ್ಯಪಾಲರು
೨.	ಭಾರತದ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ ೧೯೯೨.	೧-೨-೧೯೯೩	ರಾಜ್ಯಪಾಲರು

ಅಧ್ಯಕ್ಷರು:- ಸಭೆಯ ಮುಂದೆ ಮಂಡಿಸಲಾಯಿತು.

ವರದಿಯನ್ನೊಪ್ಪಿಸುವುದು

ಶ್ರೀ ಡಿ. ಹುಲಗೆಗೌಡ (ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ):- ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ ೫೬ನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ಸಭೆಯ ಮುಂದೆ ಮಂಡಿಸಲಾಯಿತು.